# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1373
ಉತ್ತರಿಸಬೇಕಾದ ದಿನಾಂಕ : 24.12.2021
ಸದಸ್ಯರ ಹೆಸರು : ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಗ್ರಾಮೀಣ ಭಾಗದ ಕ್ರೀಡಾಪಟುಗಳಿಗೆ ಪೂರಕ ಅವಕಾಶ ಕಲ್ಪಿಸುವಲ್ಲಿ ಇಲಾಖೆ ಹಮ್ಮಿಕೊಂಡ ಕಾರ್ಯಕ್ರಮಗಳೇನು: | ರಾಜ್ಯ ಮಟ್ಟದ ಕ್ರೀಡಾಕೂಟಗಳನ್ನು ಆಯೋಜಿಸುವ ಮೂಲಕ ಗ್ರಾಮೀಣ ಭಾಗದ ಕ್ರೀಡಾಪಟುಗಳಿಗೆ ಪೂರಕ ಅವಕಾಶಗಳನ್ನು ಇಲಾಖೆಯು ಕಲ್ಪಿಸುತ್ತಿದೆ. ಅಲ್ಲದೇ, ಇಲಾಖೆಯ 34 ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ ದೈಹಿಕ ಕ್ಷಮತೆ ಮತ್ತು ಆಯಾ ಕ್ರೀಡೆಗೆ ಸಂಬಂಧಿಸಿದ ಕೌಶಲ್ಯ ಪರೀಕ್ಷೆಗಳನ್ನು ಆಧರಿಸಿ ಕ್ರೀಡಾಪಟುಗಳನ್ನು ಆಯ್ಕೆ ಮಾಡಲಾಗುತ್ತಿದೆ. ಮುಂದುವರೆದು, ಸಾಧಕ ಕ್ರೀಡಾಪಟುಗಳಿಗೆ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ ನೇರ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗುತ್ತಿದೆ.<br><br>ಅಲ್ಲದೇ, ಗ್ರಾಮೀಣ ಭಾಗದ ಕ್ರೀಡಾಪಟುಗಳಿಗೆ ತಾಲ್ಲೂಕು, ಜಿಲ್ಲೆ, ವಿಭಾಗ ಮತ್ತು ರಾಜ್ಯ ಮಟ್ಟದ ಸಿ.ಎಂ. ಕಪ್ ಕ್ರೀಡಾಕೂಟಗಳನ್ನು ನಡೆಸಲಾಗುತ್ತದೆ. ಹಾಗೆಯೇ ಗ್ರಾಮೀಣ ಪ್ರದೇಶದಲ್ಲಿ ದೇಸೀ ಕ್ರೀಡೆಗಳನ್ನು ಸ್ಥಳಿಯ ಮಟ್ಟದಲ್ಲಿ ಪ್ರೋತ್ಸಾಹಿಸಲು ಗ್ರಾಮೀಣ ಕ್ರೀಡೋತ್ಸವ ಕಾರ್ಯಕ್ರಮವನ್ನು ಹೋಬಳಿ ಮಟ್ಟದಲ್ಲಿ ಆಯೋಜಿಸಲಾಗುತ್ತಿದೆ. ನಮ್ಮೂರ ಶಾಲೆಗೆ ನಮ್ಮ ಯುವಜನರು ಕಾರ್ಯಕ್ರಮದಡಿಯಲ್ಲಿ ಕ್ರೀಡೆಯಲ್ಲಿ ಸಾಧನೆ ಮಾಡಿದ ಸರ್ಕಾರಿ ಶಾಲೆಗಳಿಗೆ ಕ್ರೀಡಾ ಚಟುವಟಿಕೆಗಳ ಉತ್ತೇಜನಕ್ಕಾಗಿ ಪ್ರೋತ್ಸಾಹ ಧನ ನೀಡಲಾಗುತ್ತಿದೆ. |
| ಆ | ಗ್ರಾಮೀಣ ಭಾಗದ ಪ್ರತಿಭಾನ್ವಿತ ಕ್ರೀಡಾಪಟುಗಳನ್ನು ವಿಭಾಗವಾರು ಗುರುತಿಸಿ ಇವರು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಸ್ಪರ್ಧಿಸಲು ಇಲಾಖೆ ನೀಡುವ ಸವಲತ್ತುಗಳೇನು: | ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ ಆಯ್ಕೆಯಾದ ಕ್ರೀಡಾಪಟುಗಳಿಗೆ ವೈಜ್ಞಾನಿಕ ರೀತಿಯಲ್ಲಿ ನುರಿತ ತರಬೇತುದಾರರಿಂದ ತರಬೇತಿ; ಉಚಿತ ವಸತಿ; ಊಟೋಪಹಾರ; ಕ್ರೀಡಾ ಸಮವಸ್ತ್ರಗಳನ್ನೊಳಗೊಂಡಂತೆ ಕ್ರೀಡಾಗಂಟನ್ನು ನೀಡಲಾಗುತ್ತಿದೆ. ಕ್ರೀಡಾಕೂಟಗಳಲ್ಲಿ ಭಾಗವಹಿಸಿದ ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯೆ/ದಿನಭತ್ಯೆ ನೀಡಲಾಗುತ್ತಿದೆ. ಕ್ರೀಡಾಪಟುಗಳ ದೈನಂದಿನ ತರಬೇತಿಗಾಗಿ ಕ್ರೀಡಾ ಸಾಮಗ್ರಿಗಳನ್ನು ಒದಗಿಸಲಾಗುತ್ತಿದೆ. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ವಿಜೇತರಾದ ಕ್ರೀಡಾಶಾಲೆ/ನಿಲಯದ ಕ್ರೀಡಾಪಟುಗಳಿಗೆ ನಗದು ಪ್ರೋತ್ಸಾಹಧನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ. |

| | | |
|---|---|---|
| | | ಗ್ರಾಮೀಣ ದೇಸೀ ಕ್ರೀಡೆಯಾದ ಕುಸ್ತಿ ಸ್ಪರ್ಧೆಯನ್ನು ಪ್ರೋತ್ಸಾಹಿಸುವ ಹಿತದೃಷ್ಟಿಯಿಂದ ಸರ್ಕಾರವು ಕರ್ನಾಟಕ ಕುಸ್ತಿ ಹಬ್ಬ ಎಂಬ ಯೋಜನೆಯನ್ನು ಕಳೆದ 2018-19ನೇ ಸಾಲಿನಿಂದ ಜಾರಿಗೆ ತಂದು ಅನುಷ್ಠಾನಗೊಳಿಸಲಾಗುತ್ತಿದೆ. ಕುಸ್ತಿ ಕ್ರೀಡೆಯನ್ನು ಉತ್ತೇಜಿಸಲು ಕ್ರೀಡಾಪಟುಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಗ್ರಾಮೀಣ ಗರಡಿಮನೆ ಯೋಜನೆಯನ್ನು ಇಲಾಖೆಯಿಂದ ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಪ್ರತಿ ಗರಡಿಮನೆ ನಿರ್ಮಾಣಕ್ಕೆ ರೂ.10.00ಲಕ್ಷಗಳ ಅನುದಾನವನ್ನು ಒದಗಿಸಲಾಗುತ್ತಿದೆ. |
| ಇ | ಕಳೆದ 2 ವರ್ಷಗಳಲ್ಲಿ ಎಷ್ಟು ಮಂದಿ ಕ್ರೀಡಾಪಟುಗಳು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಪ್ರತಿನಿಧಿಸಿದ್ದಾರೆ: ಇವರಿಗೆ ಸರ್ಕಾರ ನೀಡಿದ ಸವಲತ್ತುಗಳೇನು? (ಸಂಪೂರ್ಣ ಮಾಹಿತಿ ಒದಗಿಸುವುದು) | ಕಳೆದ 2 ವರ್ಷಗಳಲ್ಲಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಪ್ರತಿನಿಧಿಸಿದ ಕ್ರೀಡಾಪಟುಗಳ ಮಾಹಿತಿಯನ್ನು **ಅನುಬಂಧ- 01ರಲ್ಲಿ** ಹಾಗೂ ಇವರಿಗೆ ಇಲಾಖೆಯಿಂದ ನೀಡಲಾಗುತ್ತಿರುವ ಸವಲತ್ತುಗಳ ವಿವರಗಳನ್ನು **ಅನುಬಂಧ-02**ರಲ್ಲಿ ನೀಡಲಾಗಿದೆ. |

**ವೈಎಸ್‌ಡಿ/ಇಬಿಬಿ/214/2021**

**(ಡಾ. ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.

## ಅನುಬಂಧ-01

**ಕಳೆದ 2 ವರ್ಷಗಳಲ್ಲಿ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಪ್ರತಿನಿಧಿಸಿದ ಕ್ರೀಡಾಪಟುಗಳ ಜಿಲ್ಲಾವಾರು ವಿವರ**

| ಕ್ರ. ಸಂ | ಜಿಲ್ಲೆ | ರಾಜ್ಯ ಮಟ್ಟ | ರಾಷ್ಟ್ರ ಮಟ್ಟ | ಅಂತಾರಾಷ್ಟ್ರೀಯ ಮಟ್ಟ |
|---|---|---|---|---|
| 1 | ಬೆಂಗಳೂರು ನಗರ | 703 | 130 | 47 |
| 2 | ಬೆಂಗಳೂರು ಗ್ರಾಮಾಂತರ | 11 | 13 | 2 |
| 3 | ರಾಮನಗರ | 0 | 0 | 0 |
| 4 | ಕೋಲಾರ | 4 | 4 | 0 |
| 5 | ಚಿಕ್ಕಬಳ್ಳಾಪುರ | 0 | 1 | 0 |
| 6 | ತುಮಕೂರು | 30 | 26 | 0 |
| 7 | ಶಿವಮೊಗ್ಗ | 221 | 107 | 33 |
| 8 | ಚಿತ್ರದುರ್ಗ | 350 | 100 | 0 |
| 9 | ದಾವಣಗೆರೆ | 36 | 32 | 0 |
| 10 | ಮೈಸೂರು | 62 | 45 | 1 |
| 11 | ಮಂಡ್ಯ | 55 | 35 | 10 |
| 12 | ಚಾಮರಾಜನಗರ | 20 | 2 | 0 |
| 13 | ಚಿಕ್ಕಮಗಳೂರು | 49 | 12 | 0 |
| 14 | ಹಾಸನ | 0 | 18 | 0 |
| 15 | ದಕ್ಷಿಣ ಕನ್ನಡ | 149 | 33 | 0 |
| 16 | ಉಡುಪಿ | 35 | 15 | 0 |
| 17 | ಕೊಡಗು | 302 | 96 | 0 |
| 18 | ಬೆಳಗಾವಿ | 21 | 51 | 4 |
| 19 | ಕಾರವಾರ | 66 | 0 | 0 |
| 20 | ಧಾರವಾಡ | 70 | 26 | 0 |

| | | | | |
|---|---|---|---|---|
| 21 | ಬಿಜಾಪುರ | 15 | 95 | 0 |
| 22 | ಬಾಗಲಕೋಟೆ | 41 | 84 | 5 |
| 23 | ಗದಗ | 20 | 10 | 0 |
| 24 | ಹಾವೇರಿ | 30 | 46 | 1 |
| 25 | ಗುಲ್ಬರ್ಗಾ | 11 | 58 | 3 |
| 26 | ಬಳ್ಳಾರಿ | 36 | 11 | 5 |
| 27 | ರಾಯಚೂರು | 0 | 0 | 0 |
| 28 | ಬೀದರ್ | 1 | 3 | 1 |
| 29 | ಕೊಪ್ಪಳ | 95 | 58 | 3 |
| 30 | ಯಾದಗಿರಿ | 25 | 15 | 2 |
| | ಒಟ್ಟು | **2458** | **1126** | **117** |

## ಅನುಬಂಧ-02

## ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಪ್ರತಿನಿಧಿಸಿದ ಕ್ರೀಡಾಪಟುಗಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಸವಲತ್ತುಗಳ ವಿವರ

- ನಗದು ಪುರಸ್ಕಾರ: ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.
- ಏಕಲವ್ಯ ಪ್ರಶಸ್ತಿ:ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ ನೀಡಲಾಗುವುದು.
- ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ: ದೇಸೀ ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ರಾಜ್ಯದ ಗ್ರಾಮೀಣ ಕ್ರೀಡಾಪ್ರತಿಭೆಗಳಿಗೆ ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ ಹಾಗೂ ನಗದನ್ನು ನೀಡಿ ಗೌರವಿಸಲಾಗುವುದು.
- ಶೈಕ್ಷಣಿಕ ಶುಲ್ಕ ಮರುಪಾವತಿ: ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರು ಪಾವತಿ ಮಾಡಲಾಗುತ್ತಿದೆ.
- ಕ್ರೀಡಾ ವಿದ್ಯಾರ್ಥಿ ವೇತನ: ರಾಜ್ಯಮಟ್ಟದಲ್ಲಿ ಪದಕ ವಿಜೇತರಾಗಿ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.
- ಪರಿಶಿಷ್ಟ ಜಾತಿ ಮತ್ತು ಪಂಗಡದ ಅಂತರ-ರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ಕ್ರಮವಾಗಿ ತಲಾ ರೂ.5.00, 3.00 ಮತ್ತು ರೂ.1.00 ಲಕ್ಷಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.
- ಅಂತರಾಷ್ಟ್ರೀಯ/ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಜಿಮ್ ಸಾಮಗ್ರಿಗಳನ್ನು ನೀಡಲಾಗುತ್ತಿದೆ.
- ಕ್ರೀಡಾ ವಸತಿ ಶಾಲೆ/ ನಿಲಯಗಳಲ್ಲಿ ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.
- ಕ್ರೀಡಾ ಮೂಲಭೂತ ಸೌಕರ್ಯಗಳ ಸೃಜನೆ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಿವೇಶನಗಳಲ್ಲಿ ಕ್ರೀಡಾ ಮೂಲ ಸೌಕರ್ಯಗಳನ್ನು ಸೃಜಿಸುವ ಮೂಲಕ ಕ್ರೀಡಾಪಟುಗಳ ಕ್ರೀಡಾ ತರಬೇತಿಗೆ ಉತ್ತೇಜನ ನೀಡಲಾಗುತ್ತಿದೆ.
- ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಕ್ರೀಡಾಕೂಟಗಳ ಆಯೋಜನೆಗೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ.
- ಯುವಜನರಿಗೆ ಸಾಹಸ ಕ್ರೀಡಾ ಪ್ರಶಿಕ್ಷಕರಾಗಲು ವಿವಿಧ ಹಂತಗಳ ತರಬೇತಿಯನ್ನು ನೀಡಲಾಗುತ್ತಿದೆ.
- ಖೇಲೋ ಇಂಡಿಯಾ ಯೋಜನೆ: ಕೇಂದ್ರ ಸರ್ಕಾರದ ಖೇಲೋ ಇಂಡಿಯಾ ಯೋಜನೆಯಡಿಯಲ್ಲಿ ಕ್ರೀಡಾಕೂಟಗಳ ಸಂಘಟನೆ, ನಗರ ಪ್ರದೇಶಗಳಲ್ಲಿ ಕ್ರೀಡಾ ಮೂಲಭೂತ ಸೌಕರ್ಯಗಳ ನಿರ್ಮಾಣ ಹಾಗೂ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹ ನೀಡಲಾಗುತ್ತಿದೆ. ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ಖೇಲೋ ಇಂಡಿಯಾ ಸಣ್ಣ ಕೇಂದ್ರಗಳನ್ನು ಜಿಲ್ಲಾಮಟ್ಟದ 31 ಕೇಂದ್ರಗಳಲ್ಲಿ ಆಯಾ ಜಿಲ್ಲೆಯ ಪ್ರಚಲಿತ ಕ್ರೀಡೆಗಳನ್ನು ಪ್ರೋತ್ಸಾಹಿಸಲು ಕೇಂದ್ರ ಸರ್ಕಾರವು ಮಂಜೂರಾತಿ ನೀಡಿರುತ್ತದೆ.